ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 30–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಬೆಳ್ಳಿ ಸಿನಿಮಾ – ಬೆಳ್ಳಿಮಾತು:<br><br>ಬೆಳ್ಳಿ ಸಿನಿಮಾ ಪ್ರದರ್ಶನ –"ಭಾರತ್ ಸ್ಟೋರ್ಸ್ "<br><br>ಬೆಳ್ಳಿಮಾತು:<br><br>ಪಿ. ಶೇಷಾದ್ರಿ,<br><br>"ಭಾರತ್ ಸ್ಟೋರ್ಸ್"<br>ಚಿತ್ರದ ನಿರ್ದೇಶಕರು<br><br>ಅಧ್ಯಕ್ಷತೆ:<br><br>ಎಸ್. ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು<br>ಕರ್ನಾಟಕ ಚಲನಚಿತ್ರ ಅಕಾಡೆಮಿ<br><br>ಮುಖ್ಯ ಅತಿಥಿಗಳು:<br><br>ಬಸಂತ್‌ಕುಮಾರ್ ಪಾಟೀಲ್,<br>ಚಲನಚಿತ್ರ ನಿರ್ಮಾಪಕರು.<br><br>ಶ್ರೀಮತಿ ಸುಧಾರಾಣಿ,<br>ಚಿತ್ರನಟಿ.<br><br>ಹೆಚ್.ಜಿ. ದತ್ತಾತ್ರೇಯ, (ದತ್ತಣ್ಣ)<br>ಹಿರಿಯ ಚಲನಚಿತ್ರ ನಟ. | 31–10–2015<br><br>ಶನಿವಾರ<br><br>ಸಂಜೆ<br><br>4–00 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:

## " ಭಾರತ್ ಸ್ಟೋರ್ಸ್ " ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ-ಬೆಳ್ಳಿಮಾತು ಕಾರ್ಯಕ್ರಮದಡಿ ಅಕ್ಟೋಬರ್ 31 ರ ಶನಿವಾರದಂದು ಬೆಳ್ಳಿ ಸಿನಿಮಾ " ಭಾರತ್ ಸ್ಟೋರ್ಸ್ " ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ಪಿ. ಶೇಷಾದ್ರಿ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಅಕ್ಟೋಬರ್ 31 ರಂದು ಸಂಜೆ 4-00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಿರ್ಮಾಪಕ ಬಸಂತಕುಮಾರ್ ಪಾಟೀಲ್, ಚಲನಚಿತ್ರ ನಟಿ ಶ್ರೀಮತಿ ಸುಧಾರಾಣಿ ಹಾಗೂ ಹಿರಿಯ ಚಲನಚಿತ್ರ ನಟ ಹೆಚ್.ಜಿ. ದತ್ತಾತ್ರೇಯ (ದತ್ತಣ್ಣ) ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## ನವೆಂಬರ್ 16 ರಿಂದ ವಿಧಾನಸಭೆ ಅಧಿವೇಶನ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಹದಿನಾಲ್ಕನೇ ವಿಧಾನಸಭೆಯ ಎಂಟನೇ ಅಧಿವೇಶನದ ಮುಂದುವರೆದ ಉಪವೇಶನವು ನವೆಂಬರ್ 16 ರ ಬೆಳಿಗ್ಗೆ 11-00 ಗಂಟೆಗೆ ಬೆಂಗಳೂರಿನ ವಿಧಾನಸೌಧದ ವಿಧಾನಸಭೆಯ ಸಭಾಂಗಣದಲ್ಲಿ ಸಮಾವೇಶಗೊಳ್ಳಲಿದೆ ಎಂದು ಕರ್ನಾಟಕ ವಿಧಾನಸಭೆಯ ಪ್ರಭಾರ ಕಾರ್ಯದರ್ಶಿ ಜಯತೀರ್ಥ ಪಿ. ಗಲಗಲಿ ಅವರು ತಿಳಿಸಿದ್ದಾರೆ.

ತಾತ್ಕಾಲಿಕ ಕಾರ್ಯಕ್ರಮದ ಪಟ್ಟಿಯಂತೆ ನವೆಂಬರ್ 21 ಹಾಗೂ 22 ರಂದು ಕಾರ್ಯಕಲಾಪವಿರುವುದಿಲ್ಲ. ನವೆಂಬರ್ 16 ರಿಂದ 27 ರವರೆಗೆ ಸರ್ಕಾರಿ ಮತ್ತು ಖಾಸಗಿ ಕಾರ್ಯಕಲಾಪಗಳು ನಡೆಯಲಿವೆ ಎಂದು ಅವರು ತಿಳಿಸಿದ್ದಾರೆ.

ಪಲ್ಲವಿ:ಬಾಬು:ಜಿಪಿಆರ್.

## ಕೆ.ಪಿ.ಎಸ್.ಸಿ. ಕೀ ಉತ್ತರ ಪ್ರಕಟ

ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)

ಸರ್ಕಾರದ ವಿವಿಧ ಇಲಾಖೆಗಳಲ್ಲಿನ ತಾಂತ್ರಿಕ ಮತ್ತು ತಾಂತ್ರಿಕೇತರ ಹುದ್ದೆಗಳಿಗೆ ಆಗಸ್ಟ್ 28 ರಿಂದ 31 ರವರೆಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಕರ್ನಾಟಕ ಲೋಕಸೇವಾ ಆಯೋಗದ ವೆಬ್‌ಸೈಟ್ "http://kpsc.kar.nic.in/Key Answers" ನಲ್ಲಿ ಪ್ರಕಟಿಸಲಾಗಿದೆ.

ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳಿಂದ ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪ್ರಕಾಶನದ ಪ್ರತಿ, ವಿಷಯ, ಪ್ರಶ್ನೆ ಪುಸ್ತಿಕೆಯ ಶ್ರೇಣಿ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ. 50/- ರ ಶುಲ್ಕರೊಂದಿಗೆ (ಐಪಿಒ/ಡಿಡಿ ಮೂಲಕ) "ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು" ಇವರಿಗೆ ಕೀ-

**ಉತ್ತರದೊಂದಿಗೆ ಪ್ರಕಟಿಸಿರುವ ನಮೂನೆಯಲ್ಲಿ ನವೆಂಬರ್ 6 ರೊಳಗೆ (ಕಚೇರಿ ವೇಳೆಯಲ್ಲಿ) ಲಿಖಿತ ಮನವಿಯ ಮೂಲಕ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ಅವಧಿಯ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.**

ಪಲ್ಲವಿ:ಬಾಬು:ಜಿಪಿಆರ್.

## ಆಕ್ಷೇಪಣೆ ಸಲ್ಲಿಸಿ

**ಬೆಂಗಳೂರು, ಅಕ್ಟೋಬರ್ 30 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 25-9-2014 ರ ಅಧಿಸೂಚನೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಮಹಿಳಾ ಶುಶ್ರೂಷಕಿಯರ 07 ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 29-10-2015 ರಂದು ಆಯೋಗದ ಅಂತರ್ಜಾಲ http://kpsc.kar.nic.in ದಲ್ಲಿ ಅಭ್ಯರ್ಥಿಗಳಿಗಾಗಿ ಪ್ರಕಟಿಸಿದೆ.**

**ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಈ ಆಯ್ಕೆಪಟ್ಟಿಯಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001, ಇವರಿಗೆ ಸಲ್ಲಿಸಬಹುದೆಂದು ಈ ಮೂಲಕ ತಿಳಿಸಲಾಗಿದೆ. ದಿನಾಂಕ : 13-11-2015 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.**

ಪಲ್ಲವಿ:ಬಾಬು:ಜಿಪಿಆರ್.

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಅ. 30 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:01-11-2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಹೊಳಸಾಲಯ್ಯ ಹೆಚ್.ಸಿ. ಕನಕಪುರ, ರಾಮನಗರ ಜಿಲ್ಲೆ ಮತ್ತು ತಂಡದವರಿಂದ ಜನಪದ ಗೀತೆ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ 1ನೇ ಪಡೆಯ ಬ್ಯಾಂಡ್ ಕಲಾವಿದರು ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ ಆಕರ್ಷಕ **"ಪೊಲೀಸ್ ಬ್ಯಾಂಡ್"** ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಡುತ್ತಾರೆ.
3. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಎನ್. ಸರ್ವೋತ್ತಮ್, ಹಲಸಹಳ್ಳಿ, ಮಳವಳ್ಳಿ ತಾಲ್ಲೂಕು, ಮಂಡ್ಯಜಿಲ್ಲೆ ಮತ್ತು ತಂಡದವರಿಂದ ಜನಪದ ಗೀತೆ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
5. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
8. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
9. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಹಯೋಗದೊಂದಿಗೆ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಸಂಗೀತ್ ಭಾರತಿ ಇನ್ಸ್ಟಿಟ್ಯೂಟ್ ರವರ ವತಿಯಿಂದ ನೃತ್ಯ ಪ್ರದರ್ಶನವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 10.00 ಗಂಟೆಯಿಂದ ಬೆಳಿಗ್ಗೆ 11.00 ಗಂಟೆಯವರೆಗೆ ST. JOSEPH'S COLLEGE (Autonomous), Lalbagh Road, Bangalore ರವರ ವತಿಯಿಂದ ಪರಿಸರಸ್ನೇಹಿ ಹಾಗೂ ಕನ್ನಡ ರಾಜ್ಯೋತ್ಸವದ ಬಗ್ಗೆ ಮೂಕಭಿನಯ ಹಾಗೂ ಮೈಮ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಡಾ. ಸಿ.ಬಿ. ಹೊನ್ನುಸಿದ್ಧಾರ್ಥ, ಕವಿಗಳು, ಪ್ರಾಧ್ಯಾಪಕರು ಕ.ಅ. ಕೇಂದ್ರ, ಬೆಂಗಳೂರು ವಿಶ್ವವಿದ್ಯಾಲಯರವರ ಅಧ್ಯಕ್ಷತೆಯಲ್ಲಿ ಕವಿಗಳಾದ ಶ್ರೀ ಚೀಮನಹಳ್ಳಿ ರಮೇಶ್ ಬಾಬು, ಶ್ರೀಮತಿ ಸತ್ಯಮಂಗಲ ಆರ್. ಮಹದೇವ್, ಶ್ರೀ ಎಂ.ಕಾಳೀರ ಶೆಟ್ಟಿ , ಶ್ರೀ ಶರಣಪ್ಪ ಗಬ್ಬೂರ್, ಶ್ರೀ ಕುಮಾರ್ ಇಂದ್ರಬೆಟ್ಟ, ಶ್ರೀ ಮಖ್ತರ್ ಪಾಷ, ಶ್ರೀಮತಿ ಎಸ್.ಎಂ. ರೂಪ ಹಾಗೂ ಶ್ರೀ ದೊಡ್ಡಕಲ್ಲನಹಳ್ಳಿ ನಾರಾಯಣಪ್ಪರವರುಗಳಿಂದ ಕನ್ನಡ ಕಾವ್ಯಗೋಷ್ಠಿ ಕಾರ್ಯಕ್ರಮವನ್ನು ಮತ್ತು ಶ್ರೀ ಗುರುಸುಜಯ್ ಶಾನ್‌ಭಾಗ್ ರವರಿಂದ ಕನ್ನಡ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 11.00 ಗಂಟೆಯವರೆಗೆ ವಿದ್ಯಾರಣ್ಯ ಸ್ವಯಂ ಸೇವಾ ಸಂಸ್ಥೆ, ಮಂಡೂರುರವರು ನಡೆಸಿಕೊಡುತ್ತಿರುವ ವೃದ್ಧಾಶ್ರಮ ವಿಕಲಚೇತನ ಮಕ್ಕಳ ಶಾಲೆ ಹಾಗೂ ಸ್ವಧಾರ ಮಹಿಳಾ ಪುನಶ್ಚೇತನ ಕೇಂದ್ರ ಇವುಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 11.00 ಗಂಟೆಯವರೆಗೆ ಇರುವೆ ಸಂಸ್ಥೆಯ ವತಿಯಿಂದ ಕನ್ನಡದ ಸಮಕಾಲೀನ ಚಿತ್ರಕಲೆಗಳು ಮತ್ತು ವಿನ್ಯಾಸಗಳ ಪ್ರದರ್ಶನವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಘನತ್ಯಾಜ್ಯ ನಿರ್ವಹಣೆ ಮತ್ತು ಅಡುಗೆ ಮನೆಯಲ್ಲಿನ ತ್ಯಾಜ್ಯ (Kitchen Waste) ಉಪಯೋಗಿಸಿ ಗೊಬ್ಬರ ಉತ್ಪತ್ತಿ ಮಾಡುವುದು ಹಾಗೂ ಕಸದಿಂದ ಬಯೋಗ್ಯಾಸ್ ಉತ್ಪಾದನೆಯ**

ಬಗ್ಗೆ ಶ್ರೀ ಎನ್.ಎಸ್.ರಮಾಕಾಂತ್, **Co-Founder, Solid Waste Management Round Table, Bengaluru** ರವರಿಂದ ಪ್ರಾತ್ಯಕ್ಷಿಕೆ ಮೂಲಕ ತಿಳುವಳಿಕೆ ನೀಡಲಾಗುವುದು.

**ಬಾಬು:ಜಿಪಿಆರ್.**

# ಸೈನಿಕ ವಸತಿ ಶಾಲೆಯ 6 ಮತ್ತು 9ನೇ ತರಗತಿಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಅ. 30 (ಕರ್ನಾಟಕ ವಾರ್ತೆ)

ವಿಜಯಪುರದ ಸೈನಿಕ ವಸತಿ ಶಾಲೆಯ 6 ಮತ್ತು 9ನೇ ತರಗತಿಗಳಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2016–17 ನೇ ಸಾಲಿನ ಪ್ರವೇಶ ಪರೀಕ್ಷೆಯು ಜನವರಿ 3, 2016 ರಂದು ವಿಜಯಪುರ, ಬೆಳಗಾವಿ, ಬೆಂಗಳೂರು, ಧಾರವಾಡ, ಗುಲ್ಬರ್ಗಾ ನಗರಗಳಲ್ಲಿ ನಡೆಯಲಿದೆ. ಅರ್ಜಿ ನಮೂನೆಗಳನ್ನು ನವೆಂಬರ್ 21, 2015 ರವರೆಗೂ ವಿತರಿಸಲಿದ್ದು ಅರ್ಜಿಗಳನ್ನು ಪ್ರಾಚಾರ್ಯರು, ಸೈನಿಕ ಶಾಲೆ, ವಿಜಯಪುರ ಇವರಿಂದ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ನವೆಂಬರ್ 30, 2015 ರೊಳಗೆ ಸಲ್ಲಿಸಬಹುದಾಗಿದೆ.

ಅನುಕ್ರಮವಾಗಿ ವಾರ್ಷಿಕ ಶಾಲಾ ಶುಲ್ಕವು ರೂ. 52,345 ಮತ್ತು ರೂ. 23,895 ಆಗಿದ್ದು, ಲಿಖಿತ ಪರೀಕ್ಷೆ, ಸಂದರ್ಶನ ಮತ್ತು ವೈದ್ಯಕೀಯ ಅರ್ಹತೆ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವುದು ಎಂದು ವಿಜಯಪುರದ ಸೈನಿಕ ವಸತಿ ಶಾಲೆಯ ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಸೈನಿಕ ಶಾಲೆಯ ದೂರವಾಣಿ ಸಂಖ್ಯೆ 08352 – 270638 ಮೂಲಕ ಸಂಪರ್ಕಿಸಬಹುದಾಗಿದೆ.

ಪಲ್ಲವಿ:ಮಮತ:ಜಿಪಿಆರ್.